**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.988/2025.**

ಪಿರ್ಯಾದುದಾರರುಃ- ಸೇಫ ಸ್ಟಾರ್ ಸೌಹಾರ್ದ ಸಹಕಾರಿ ಸಂಘ ನಿಯಮಿತ,
ಶಾಖೆಃ ಮಂಕಿ,
ಪ್ರತಿನಿಧಿಸುವವರು,
ಜೀವನ ಹೊನ್ನಪ್ಪ ನಾಯ್ಕ,
ವಯಸ್ಸು ಸುಮಾರು 38 ವರ್ಷ,
ವೃತ್ತಿಃ ಮ್ಯಾನೇಜರ್,
ಸಾಕೀನಃ ಕರ್ಕಿ, ತಾಃ ಹೊನ್ನಾವರ.

**-ವಿರುದ್ಧ-**

ಆರೋಪಿಯ ಹೆಸರುಃ- ಸುನೀಲ ಲಕ್ಷ್ಮಣ ನಾಯ್ಕ,
ಸಾಕೀನಃ- ಹಕ್ಕಲಕೇರಿ, ಗುಣಂವತೆ,
ತಾಲೂಕುಃ- ಹೊನ್ನಾವರ, (ಉ.ಕ.).

**ಆಪಾದನೆ**

ಶ್ರೀ ಈರಣ್ಣ ಹುಣಶಿಕಟ್ಟಿ, ಬಿ.ಕಾಂ.,ಎಲ್.ಎಲ್.ಬಿ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ. ನ್ಯಾಯಿಕ ದಂಡಾಧಿಕಾರಿ, C/C ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯಾದ ನೀವು ಪಿರ್ಯಾದಿಯವರ ಸಂಸ್ಥೆಯಲ್ಲಿ ರೂ.3,50,000/- ಸಾಲವನ್ನು ಪಡೆದುಕೊಂಡಿದ್ದು, ಸದ್ರಿ ಸಾಲದ ಪೈಕಿ ರೂ.3,85,762/- ಕಟ್‌ಬಾಕಿಯಾಗಿದ್ದು, ಸದ್ರಿ ಸಾಲವನ್ನು ಪಿರ್ಯಾದಿಯ ಸಂಸ್ಥೆಯವರು ಮರು ಪಾವತಿಗಾಗಿ ನಿಮ್ಮ ಬಳಿ ಕೇಳಿದಾಗ, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಹೊನ್ನಾವರ** ಶಾಖೆಯ ಚೆಕ್ ನಂ.764311 ನ್ನು ದಿನಾಂಕ 26-03-2025 ರಂದು ರೂ. 3,85,762/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ

ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Funds Insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 26-03-2025 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 27-03-2025 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ "Refused" ಎಂಬ ಶರಾದೊಂದಿಗೆ ಪಿರ್ಯಾದಿದಾರನ ವಕೀಲರಿಗೆ ದಿನಾಂಕ 29-03-2025 ರಂದು ವಾಪಸ್ಸು ಬಂದಿರುತ್ತದೆ. ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಸ್ದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ

ಸಹಿ ಇದೆ/-

**ದಿನಾಂಕ 10-12-2025.**

**(ಈರಣ್ಣ ಹುಣಶಿಕಟ್ಟಿ).,**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

**C/C ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.ರವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ